ಹೊಂಡಗಳನ್ನು ನಿರ್ಮಿಸಲು ಇದುವರೆವಿಗೂ ಸರ್ಕಾರದಿಂದ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ;

ಆ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಏನು ಕ್ರಮ ಕೈಗೊಂಡಿದೆ ?

ಶ್ರೀ ಬಂಡೆಪ್ಪ ಕಾಶಂಪುರ್ (ಕೃಷಿ ಸಚಿವರು) –

ಅ) ಹಣ ಬಿಡುಗಡೆ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ತೀವ್ರ ಪರಿಶೀಲನೆಯಲ್ಲಿದೆ.

1328 (1595) : ಶ್ರೀ ಅಂಜನಾಮೂರ್ತಿ (ನೆಲಮಂಗಲ) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸಣ್ಣ ಮತ್ತು ಅತಿ ಸಣ್ಣ ರೈತರು ಕೃಷಿ ಚಟುವಟಿಕೆಗಳಿಗೆ ಎತ್ತು ಹಾಗೂ ಗಾಡಿಗಳನ್ನು ಅವಲಂಭಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಸರ್ಕಾರ ಘೋಷಿಸಿರುವ ಪ್ರಕಾರ ಇವುಗಳನ್ನು ಖರೀದಿಸಲು ಶೇ.50 ರಷ್ಟರ ಸಹಾಯಧನದ ಸೌಲಭ್ಯವನ್ನು ಒದಗಿಸಲಾಗಿದೆಯೇ;

ಇ) ಇದಕ್ಕಾಗಿ ಈಗಾಗಲೇ ಸರ್ಕಾರ ಬಿಡುಗಡೆ ಮಾಡಿದ ಹಣವೆಷ್ಟು ; (ತಾಲ್ಲೂಕುವಾರು ಹಾಗು ಜಿಲ್ಲಾವಾರು ಮಾಹಿತಿ ನೀಡುವುದು) ?

ಶ್ರೀ ಬಂಡೆಪ್ಪ ಕಾಶಂಪುರ್ (ಕೃಷಿ ಸಚಿವರು) –

ಅ) ಹೌದು

ಆ) 500.00 ಲಕ್ಷ ರೂಪಾಯಿಗಳ ವೆಚ್ಚದಲ್ಲಿ ಈ ಕಾರ್ಯಕ್ರಮವನ್ನು 2006–07ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲು ದಿನಾಂಕ 11.07.2006 ರಂದು ಆದೇಶ ಹೊರಡಿಸಲಾಗಿದೆ.

1329 (1003) : ಶ್ರೀ ರಘುಪತಿ ಭಟ್ ಕೆ. (ಉಡುಪಿ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬ್ರಹ್ಮಾವರ ಸಕ್ಕರೆ ಕಾರ್ಖಾನೆ ಉಡುಪಿ ಜಿಲ್ಲೆಯ ರೈತರ ಜೀವ... ಎಂಬುದನ್ನು ಸರ್ಕಾರ ಮನಗಂಡಿದೆಯೇ ;

ಆ) ಹಾಗಿದ್ದಲ್ಲಿ, ಬ್ರಹ್ಮಾವರ ಸಕ್ಕರೆ ಕಾರ್ಖಾನೆಯ ಪುನಃಶ್ಚೇತನಕ್ಕೆ ಸರ್ಕಾರ ಕೈಗೊಂಡ ಕ್ರಮವೇನು ;

ಇ) ಬ್ರಹ್ಮಾವರ ಸಕ್ಕರೆ ಕಾರ್ಖಾನೆಯ ರೈತರ ಬಾಕಿ ಹಣ ಮತ್ತು ನೌಕರ ಸಿಬ್ಬಂದಿಗಳ ಬಾಕಿ ವೇತನ ಪಾವತಿ ಬಗ್ಗೆ ಸರ್ಕಾರದ ನಿಲುವೇನು ;

ಈ) ಬ್ರಹ್ಮಾವರ ಸಕ್ಕರೆ ಕಾರ್ಖಾನೆಯ ಪುನಃಶ್ಚೇತನಕ್ಕೆ ಮಾನ್ಯ ಮುಖ್ಯಮಂತ್ರಿಗಳು ಮತ್ತು ಉಪ ಮುಖ್ಯಮಂತ್ರಿಗಳವರು ಹಾಗೂ ಸಕ್ಕರೆ ಸಚಿವರು ನೀಡಿದ್ದ ಭರವಸೆಯ ಬಗ್ಗೆ ಸರ್ಕಾರದ ನಿಲುವೇನು ?

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಯವರು) –

ಅ) ಹೌದು

ಆ) ಬ್ರಹ್ಮಾವರ ಸಕ್ಕರೆ ಕಾರ್ಖಾನೆ ಉಡುಪಿ ಜಿಲ್ಲೆ ಇದರ ಪುನಃಶ್ಚೇತನಕ್ಕೆ ಸಂಬಂಧಿಸಿದಂತೆ ಸರ್ಕಾರವು ಸಚಿವ ಸಂಪುಟದ ಉಪಸಮಿತಿಯ ತೀರ್ಮಾನದಂತೆ ಈ ಸಕ್ಕರೆ ಕಾರ್ಖಾನೆಯನ್ನು ಖಾಸಗಿಯವರಿಗೆ ಗುತ್ತಿಗೆ ಆಧಾರದ ಮೇಲೆ 7 ವರ್ಷಗಳ ಅವಧಿಗೆ ನೀಡಲು ನಿರ್ಧರಿಸಿ ದಿನಾಂಕ: 10.11.2005ರಂದು ಟೆಂಡರ್ ಆಹ್ವಾನಿಸಲಾಗಿದ್ದು, ಗುತ್ತಿಗೆ ಪಡೆಯಲು ಯಾರೂ ಮುಂದೆ ಬಂದಿರುವುದಿಲ್ಲ.

ಇ) ಬ್ರಹ್ಮಾವರ ಸಕ್ಕರೆ ಕಾರ್ಖಾನೆ ರೈತರ ಬಾಕಿ ಹಣ ಮತ್ತು ನೌಕರ ಸಿಬ್ಬಂದಿಗಳ ಬಾಕಿ ವೇತನ ಪಾವತಿ ಬಗ್ಗೆ ಸರ್ಕಾರವು ಆದೇಶ ಸಂ. ಸಇ/333/ಸಸಕಾ/2003, ದಿನಾಂಕ 09.02.2005ರನ್ವಯ ಈ ಕಾರ್ಖಾನೆಯ 110 ಎಕ್ರೆ ಜಮೀನಿನ ಪೈಕಿ 60 ಎಕ್ರೆ ಜಮೀನನ್ನು ಮಾರಾಟ ಮಾಡಿ ಅತಿ ಜರೂರು ಪಾವತಿಸಬೇಕಾದ ಕಬ್ಬಿನ ಬಿಲ್ ಕಾರ್ಮಿಕರ ವೇತನ ಬಾಕಿ, ಬ್ಯಾಂಕ್ ಸಾಲದ ಬಾಬ್ತುಗಳು ಹಾಗೂ ಇತರೆ ಬಾಬ್ತುಗಳ ಬಗ್ಗೆ ಉಪಯೋಗಿಸಿಕೊಳ್ಳಲು ಆದೇಶಿಸಿದ್ದು, ಈ ವಿಷಯದ ಬಗ್ಗೆ ಮಾನ್ಯ ಗೌರವ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂ. 19663/2004ರಲ್ಲಿ ಹೂಡಿದ್ದು, ತೀರ್ಪಿಗಾಗಿ ಬಾಕಿ ಇರುತ್ತದೆ.

ಈ) ಈ ಸಕ್ಕರೆ ಕಾರ್ಖಾನೆಯ ಪುನಃಶ್ಚೇತನಕ್ಕೆ ಖಾಸಗಿಯವರಿಗೆ ಗುತ್ತಿಗೆ ಆಧಾರದ ಮೇಲೆ ನೀಡಲು ಮತ್ತೆ ಟೆಂಡರ್ ಪ್ರಕ್ರಿಯೆ ನಡೆಸುವ ಚಿಂತನೆ ಸರ್ಕಾರಕ್ಕಿದೆ.

1300 (1270) : ಶ್ರೀ ಐವಾನ್ ನಿಗ್ಲಿ (ನಾಮಾಂಕಿತ) : ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಯಲ್ಲಿನ ಏಳು ಸಿಎಂಸಿಗಳಲ್ಲಿ ತರಕಾರಿ ಹರಾಜು ಕೇಂದ್ರಗಳಲ್ಲಿ ಸ್ಥಾಪಿಸುವ ಉದ್ದೇಶವು ಸರ್ಕಾರ ಹೊಂದಿದೆಯೇ; ಇದರಿಂದಾಗಿ ನಗರದಲ್ಲಿ ವಾಹನ ಸಂಚಾರ ನಿಯಂತ್ರಣಗೊಳಿಸಬಹುದಾಗಿದೆ ;

ಆ) ಹಾಗಿಲ್ಲದಿದ್ದಲ್ಲಿ, ಸರ್ಕಾರವು ಈ ಮಾದರಿಯಲ್ಲಿ ರೈತರ ಅನುಕೂಲಕ್ಕಾಗಿ ಹಾಗೂ ವಾಹನ ಸಂಚಾರ ಕಡಿಮೆಗೊಳಿಸುವುದಕ್ಕಾಗಿ ಅಳವಡಿಸಿ ಕೊಳ್ಳುವುದೇ ?